ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ
"ಜ್ಞಾನ ಸಾಗರ" ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ - 583 105
VIJAYANAGARA SRI KRISHNADEVARAYA UNIVERSITY
"Jnana Sagara" Campus, Vinayaka Nagara, Cantonment, Ballari - 583 105
ಕುಲಸಚಿವರು
Registrar
e-mail: registrarps@vskub.ac.in
website: www.vskub.ac.in

ಸಂಖ್ಯೆ: ವಿಶ್ರೀಕೃವಿಬ/ಆಡಳಿತ/ಅ.ಉ–ನೇ/2023–24/2942 ದಿನಾಂಕ:24.01.2024

## 2023–24ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರ/ ತಾಂತ್ರಿಕ ಸಹಾಯಕರು ಹುದ್ದೆಗೆ ಅರ್ಜಿ ಆಹ್ವಾನ

ವಿಷಯ: 2023–24ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರ/ ತಾಂತ್ರಿಕ ಸಹಾಯಕರು ಹುದ್ದೆಗೆ ಅರ್ಜಿ ಆಹ್ವಾನ ಕುರಿತು

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:24.01.2024

*****

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿಯ ಮುಖ್ಯ ಆವರಣದ CEMARF(Center of Excellence in Multidisciplinary Advanced Research facility)ಕೇಂದ್ರದಲ್ಲಿನ ಅಡ್ವಾನ್ಸ್ ಉಪಕರಣಗಳ ನಿರ್ವಹಣೆ ಮತ್ತು ಎಂ.ಎಸ್ಸಿ ವಿದ್ಯಾರ್ಥಿಗಳ ಅಡ್ವಾನ್ಸ್ ಉಪಕರಣಗಳ ಮೇಲಿನ ಪ್ರಾಯೋಗಿಕ ತರಗತಿಗಳು ಹಾಗೂ ಸಂಶೋಧನಾ ವಿದ್ಯಾರ್ಥಿಗಳ ಸ್ಯಾಂಪಲ್ ವಿಶ್ಲೇಷಣೆಯನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರ /ತಾಂತ್ರಿಕ ಸಹಾಯಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

### ಸ್ನಾತಕೋತ್ತರ ವಿಭಾಗಗಳ ವಿವರ

| ಕ್ರ.ಸಂ | ಸ್ನಾತಕೋತ್ತರ ವಿಭಾಗಗಳು | ಅಂದಾಜು ಸಂಖ್ಯೆಗಳು |
|---|---|---|
| 01 | CEMARF ಅತಿಥಿ ಉಪನ್ಯಾಸಕರು/ ತಾಂತ್ರಿಕ ಸಹಾಯಕರು | 01 |
| | ಒಟ್ಟು | **01** |

ಅಭ್ಯರ್ಥಿಗಳಿಗೆ ಸೂಚನೆ:

- ಅತಿಥಿ ಉಪನ್ಯಾಸಕರ/ತಾಂತ್ರಿಕ ಸಹಾಯಕರ ಹುದ್ದೆಗೆ ಎಂ.ಎಸ್ಸಿ ರಸಾಯನಶಾಸ್ತ್ರ ಅಥವಾ ಭೌತಶಾಸ್ತ್ರ ವಿದ್ಯಾರ್ಹತೆ ಹೊಂದಿರಬೇಕು.
- ಅತಿಥಿ ಉಪನ್ಯಾಸಕರ/ತಾಂತ್ರಿಕ ಸಹಾಯಕರನ್ನು ಕಾಲಕಾಲಕ್ಕೆ ಹೊರಡಿಸುವ ಸರಕಾರಿ ನಿಯಮಾವಳಿಯ ಪ್ರಕಾರ ನೇಮಕ ಮಾಡಲಾಗುವುದು.
- ಈ ಹುದ್ದೆಗಳು ಸಂಪೂರ್ಣವಾಗಿ ತಾತ್ಕಾಲಿಕವಾಗಿದ್ದು, 2023–24 ನೇ ಶೈಕ್ಷಣಿಕ ಸಾಲಿಗೆ ಮಾತ್ರ ಸೀಮಿತವಾಗಿರುತ್ತದೆ ಹಾಗೂ ಯಾವುದೇ ಮಂಜೂರಾದ ಹುದ್ದೆಗಳಿಗೆ ವಿರುದ್ಧವಾಗಿರುವುದಿಲ್ಲ ಮತ್ತು ಸೂಚಿಸಲಾದ ಹುದ್ದೆಗಳ ಸಂಖ್ಯೆಯು ತಾತ್ಕಾಲಿಕವಾಗಿದ್ದು, ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ನೇಮಿಸಿಕೊಳ್ಳಲಾಗುವುದು. (Against the workload but not against the sanctioned post)
- ಅಧಿಸೂಚನೆಯಲ್ಲಿ ಪ್ರಕಟಿಸಿದ ಹುದ್ದೆಗಳನ್ನು ಭರ್ತಿಮಾಡುವ ಅಥವಾ ಭರ್ತಿಮಾಡದೇ ಇರುವ ಅಧಿಕಾರವನ್ನು ವಿಶ್ವವಿದ್ಯಾಲಯವು ಕಾಯ್ದಿರಿಸಿದೆ.
- ಆಯ್ಕೆಯಾದ ಅಭ್ಯರ್ಥಿಗಳ ಸೇವೆಯು ತೃಪ್ತಿಕರವಾಗಿರದಿದ್ದಲ್ಲಿ ಯಾವುದೇ ಮುನ್ಸೂಚನೆ ನೀಡದೆ ಕೆಲಸದಿಂದ ತೆಗೆದುಹಾಕುವ ಅಧಿಕಾರ ವಿಶ್ವವಿದ್ಯಾಲಯ ಹೊಂದಿದೆ.
- ಸಂದರ್ಶನಕ್ಕೆ ಹಾಜರಾದ ಮಾತ್ರಕ್ಕೆ ಅಭ್ಯರ್ಥಿಗಳು ನೇಮಕಾತಿಯೆಂದು ಭಾವಿಸತಕ್ಕದ್ದಲ್ಲ.
- ಆಯ್ಕೆಯಾದ ಅಭ್ಯರ್ಥಿಗಳು ವಿಶ್ವವಿದ್ಯಾಲಯದ ಅಧೀನಕ್ಕೊಳಪಟ್ಟಿರುವ ಯಾವುದೇ ಸ್ನಾತಕೋತ್ತರ ಕೇಂದ್ರಗಳಲ್ಲಿ ಸೇವೆ ಸಲ್ಲಿಸಲು ಸಿದ್ಧವಿರಬೇಕು.
- ನಿಗದಿತ ಅರ್ಜಿ ನಮೂನೆಗಳು, ವಿವಿಧ ವಿಭಾಗಗಳ ವಿವರ ಹಾಗೂ ಇನ್ನಿತರೆ ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯದ ಅಂತರ್ಜಾಲ www.vskub.ac.in ನೋಡತಕ್ಕದ್ದು ಹಾಗೂ ಅರ್ಜಿಗಳನ್ನು

ಡೌನ್‌ಲೋಡ್ ಮಾಡತಕ್ಕದ್ದು. ಭರ್ತಿ ಮಾಡಿದ ಅರ್ಜಿ ನಿಗದಿತ ಶುಲ್ಕ ಮತ್ತು ಲಗತ್ತುಗಳೊಂದಿಗೆ ಶೈಕ್ಷಣಿಕ ಅರ್ಹತೆ, ಅನುಭವದ ವಿವರ, ಜಾತಿ, ವರ್ಗ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಗೆಜೆಟೆಡ್ ಅಧಿಕಾರಿಯಿಂದ ದೃಢೀಕರಿಸಿದ ಪ್ರತಿಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

- ಭರ್ತಿ ಮಾಡಿದ ಅರ್ಜಿಯೊಂದಿಗೆ ನಿಗದಿತ ಶುಲ್ಕದ ಮೂಲಪ್ರತಿಯ (Original Copy) ಚಲನ್ ಅಥವಾ DDಯನ್ನು ಹಣಕಾಸು ಅಧಿಕಾರಿಗಳು, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ ಇವರ ಹೆಸರಿನಲ್ಲಿ ಪಡೆದು ಲಗತ್ತಿಸಬೇಕು ಅಥವಾ ವಿಶ್ವವಿದ್ಯಾಲಯದ ಆವರಣದಲ್ಲಿರುವ ಕೆನರಾ ಬ್ಯಾಂಕ್ ಖಾತೆ ಸಂಖ್ಯೆ: 3866101000001ಗೆ (IFSC: CNRB0003866) ಹಣ ಪಾವತಿಸಿದ ಚಲನ್‌ನ ಅಭ್ಯರ್ಥಿಯ ಪ್ರತಿಯನ್ನು ಲಗತ್ತಿಸತಕ್ಕದ್ದು.
- ಸಂದರ್ಶನದ ದಿನಾಂಕ ಮತ್ತು ಸಮಯವನ್ನು ಹಾಗೂ ಇದಕ್ಕೆ ಸಂಬಂಧಿಸಿದ ಇನ್ನಿತರೆ ಮಾಹಿತಿಯನ್ನು ವಿಶ್ವವಿದ್ಯಾಲಯದ ಜಾಲತಾಣದಲ್ಲಿ (www.vskub.ac.in) ಪ್ರಕಟಿಸಲಾಗುವುದು, ಅಭ್ಯರ್ಥಿಗಳು ವಿಶ್ವವಿದ್ಯಾಲಯದ ವೆಬ್‌ಸೈಟ್ ಗಮನಿಸಲು ತಿಳಿಸಲಾಗಿದೆ. ಸಂದರ್ಶನಕ್ಕಾಗಿ ವಿಶ್ವವಿದ್ಯಾಲಯದಿಂದ ಯಾವುದೇ ಭತ್ಯೆಗಳನ್ನು ನೀಡಲಾಗುವುದಿಲ್ಲ.
- ಸಾಮಾನ್ಯ ಅಭ್ಯರ್ಥಿಗಳಿಗೆ ರೂ. 500/- ಹಾಗೂ ಪ.ಜಾ/ಪ.ಪಂ, ಪ್ರವರ್ಗ-01 ಅಭ್ಯರ್ಥಿಗಳಿಗೆ ರೂ. 250/- ಅರ್ಜಿಶುಲ್ಕ ನಿಗದಿಪಡಿಸಲಾಗಿದೆ. ಸದರಿ ಅಭ್ಯರ್ಥಿಗಳು ತಮ್ಮ ಪ್ರವರ್ಗವಾರು ಮೂಲ ಜಾತಿ ಪ್ರಮಾಣ ಪತ್ರದ ಪ್ರತಿಯನ್ನು ಲಗತ್ತಿಸಿದ್ದಲ್ಲಿ ಮಾತ್ರ ಮೀಸಲಾತಿಗೆ ಅರ್ಹರಿರುತ್ತಾರೆ ಹಾಗೂ ಸಂದರ್ಶನದ ವೇಳೆ ಮೂಲ ಜಾತಿ ಪ್ರಮಾಣ ಪತ್ರವನ್ನು ಪರಿಶೀಲಿಸಲಾಗುವುದು.
- ಮೇಲ್ಕಂಡ ಎಲ್ಲಾ ದಾಖಲೆಗಳನ್ನು **ದಿನಾಂಕ: 03.02.2024** ಒಳಗಾಗಿ ವಿಶ್ವವಿದ್ಯಾಲಯದ ಮುಖ್ಯ ಆವರಣ, ಬಳ್ಳಾರಿಯಲ್ಲಿ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರ ಕಛೇರಿಗೆ ಖುದ್ದಾಗಿ/ರಿಜಿಸ್ಟರ್ಡ್ ಅಂಚೆ ಮುಖಾಂತರ ಸಲ್ಲಿಸತಕ್ಕದ್ದು.
- ಅಂಚೆಸೇವೆಯಲ್ಲಿ ವಿಳಂಬವಾದಲ್ಲಿ ವಿಶ್ವವಿದ್ಯಾಲಯವು ಜವಾಬ್ದಾರರಾಗುವುದಿಲ್ಲ.
- ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಆಯ್ಕೆ ಪ್ರಕ್ರಿಯೆಯು ಪ್ರಸ್ತುತ ಜಾರಿಯಿರುವ ಸರಕಾರದ ನಿಯಮಾವಳಿಗಳನ್ವಯ ಅರ್ಹತೆ (ಮೆರಿಟ್) ಹಾಗೂ ಮೀಸಲಾತಿ ಆಧಾರದ ಮೇಲೆ ನೇಮಕಾತಿಗೆ ಪರಿಗಣಿಸಲಾಗುವುದು.
- ಸಂದರ್ಶನದ ವೇಳೆಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಸಲ್ಲಿಸಿರುವ ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲಿಸಿ ತಾತ್ಕಾಲಿಕ ಆದೇಶ ನೀಡಲಾಗುವುದು.
- ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ವಿಭಾಗದ ಮುಖ್ಯಸ್ಥರು ನೀಡುವ ಕೆಲಸಗಳನ್ನು ನಿಷ್ಠೆಯಿಂದ ಪಾಲಿಸುವುದು.
- ವಿಶ್ವವಿದ್ಯಾಲಯವು ನಡೆಸುವ ತಾತ್ಕಾಲಿಕ ಉಪನ್ಯಾಸಕರ ನೇಮಕದ ಸಂದರ್ಶನವು ವಿಶ್ವವಿದ್ಯಾಲಯದ ವಿವೇಚನೆಗೆ ಒಳಪಟ್ಟಿರುತ್ತದೆ.
- ಉತ್ತಮ ಶೈಕ್ಷಣಿಕ ದಾಖಲೆ ಮತ್ತು ಸುಧಾರಿತ ಸಂಶೋಧನಾ ಸಾಧನಗಳನ್ನು ನಿರ್ವಹಿಸಲು ಪ್ರಾಯೋಗಿಕ ಜ್ಞಾನವಿರುವ ಅಭ್ಯರ್ಥಿಗಳಿಗೆ ಆದ್ಯತೆಯನ್ನು ನೀಡಲಾಗುವುದು.

24/1/24

ಕುಲಸಚಿವರು
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ,
ಬಳ್ಳಾರಿ

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ-ಕಾರ್ಯದರ್ಶಿಗಳು, ವಿಶ್ರೀಕೃ ವಿಶ್ವವಿಶ್ವವಿದ್ಯಾಲಯ, ಬಳ್ಳಾರಿ.
2. ಕುಲಸಚಿವರು (ಮೌಲ್ಯಮಾಪನ), ವಿಶ್ರೀಕೃ ವಿಶ್ವವಿಶ್ವವಿದ್ಯಾಲಯ, ಬಳ್ಳಾರಿ.
3. ಹಣಕಾಸು ಅಧಿಕಾರಿಗಳು, ವಿಶ್ರೀಕೃ ವಿಶ್ವವಿಶ್ವವಿದ್ಯಾಲಯ, ಬಳ್ಳಾರಿ.
4. ನಿರ್ದೇಶಕರು, ವಿಶ್ರೀಕೃ ವಿಶ್ವವಿಶ್ವವಿದ್ಯಾಲಯ, ಬಳ್ಳಾರಿ.
5. ಕಛೇರಿ ಪ್ರತಿ.